ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ಪಶು ವೈದ್ಯಕೀಯ ವಿಶ್ವವಿದ್ಯಾಲಯದ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ(ಶಿಕ್ಷಕರ ಕ್ಷೇತ್ರ):-

1338 (1612) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ಪಶು ವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬೀದರ್ ಇಲ್ಲಿನ ಕುಲಪತಿಗಳು ಹಾಗೂ ಇತರೆ ಅಧಿಕಾರಿಗಳು ಕೋಟ್ಯಾಂತರ ರೂಪಾಯಿಗಳ ದುರುಪಯೋಗ ಮಾಡಿರುವ ಹಗರಣ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಆ) ಕರ್ನಾಟಕ ಪಶು ವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಶ್ವವಿದ್ಯಾಲಯಕ್ಕೆ ಕೇಂದ್ರ ಸರ್ಕಾರದಿಂದ 7ನೇ ಯು.ಜಿ.ಸಿ. ಬಾಕಿ ವೇತನವನ್ನು ಬಿಡುಗಡೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ದಿನಾಂಕ ಹಾಗೂ ಆದೇಶದ ಪ್ರತಿ ನೀಡುವುದು ;

(ಇ) ವಿಶ್ವವಿದ್ಯಾಲಯದ ನಿವೃತ್ತಿಯಾಗಿರುವ ಬೋಧಕ ಸಿಬ್ಬಂದಿಯೊಬ್ಬರಿಗೆ ದಿನಾಂಕ: 31.07.2019 ರಂದು 17.50 ಲಕ್ಷ ರೂಗಳನ್ನು ಯು.ಜಿ.ಸಿ. ಬಾಕಿ ವೇತನ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಬೇರೆ ಸಿಬ್ಬಂದಿಯವರಿಗೆ ನೀಡದ ಈ ಸೌಲಭ್ಯವನ್ನು ಇವರೊಬ್ಬರಿಗೆ ನೀಡಿರುವುದಕ್ಕೆ ಕಾರಣಗಳೇನು ? (ವಿವರವಾದ ಮಾಹಿತಿ ನೀಡುವುದು)